ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: 6 ಗೃಹ - ಸಿ.ಡಿ. ಪ್ರಕರಣ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ   ದಿನಾಂಕ : DATE : 14/3/2021

## ಜಾರಕಿಹೊಳಿ ಸಿ.ಡಿ. ಪ್ರಕರಣಕ್ಕೆ ಮತ್ತೊಂದು ತಿರುವು

# ವಿಡಿಯೊ ಹರಿಬಿಟ್ಟ ಯುವತಿ

ಪ್ರಜಾವಾಣಿ ವಾರ್ತೆ

ಬೆಂಗಳೂರು: 'ತಮ್ಮ ತೇಜೋವಧೆ ಮಾಡಲು ಸಿ.ಡಿ ಷಡ್ಯಂತ್ರ ರೂಪಿಸಿರುವವರ ಬಗ್ಗೆ ತನಿಖೆ ನಡೆಸಬೇಕು' ಎಂದು ಬಿಜೆಪಿ ಶಾಸಕ ರಮೇಶ ಜಾರಕಿಹೊಳಿ ದೂರು ನೀಡಿರುವ ಬೆನ್ನಲ್ಲೇ, ಸಂತ್ರಸ್ತೆ ಎನ್ನಲಾಗಿರುವ ಯುವತಿ ರಕ್ಷಣೆ ಕೋರಿ ವಿಡಿಯೊ ಬಿಡುಗಡೆ ಮಾಡಿದ್ದಾರೆ.

'ತಮ್ಮನ್ನು ರಾಜಕೀಯವಾಗಿ ಮುಗಿಸಲು 'ಮಹಾನಾಯಕ' ಷಡ್ಯಂತ್ರ ರೂಪಿಸಿದ್ದಾರೆ. ದೂರಿನಲ್ಲಿ ಎಲ್ಲ ವಿವರ ನೀಡುವೆ' ಎಂದು ಹೇಳಿದ್ದ ರಮೇಶ ಜಾರಕಿಹೊಳಿ, ದೂರಿನಲ್ಲಿ ಯಾವುದನ್ನೂ ಉಲ್ಲೇಖಿಸಿಲ್ಲ. ಇದರ ಹಿಂದೆ ಹಲವರಿದ್ದಾರೆ ಎಂದಷ್ಟೇ ಹೇಳಿದ್ದಾರೆ. ದೂರು ಆಧರಿಸಿ ಎಫ್ಐಆರ್ ದಾಖಲಾಗಿದೆ.

ಸಂತ್ರಸ್ತ ಯುವತಿಯು ರಕ್ಷಣೆ ಕೋರಿ ವಿಡಿಯೊ ಬಿಡುಗಡೆ ಮಾಡುತ್ತಿದ್ದಂತೆ, ರಾಜ್ಯ ಮಹಿಳಾ ಆಯೋಗವು ಶನಿವಾರ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡಿದೆ. 'ಯುವತಿಯು ಭಯಗೊಂಡಿರುವುದು ಮತ್ತು ಆತಂಕದಲ್ಲಿರುವುದು ಅವರ ಹೇಳಿಕೆಯಿಂದ ಸ್ಪಷ್ಟವಾಗುತ್ತಿದೆ. ಅವರಿಗೆ ರಕ್ಷಣೆ ಒದಗಿಸುವುದು ಸರ್ಕಾರದ ಜವಾಬ್ದಾರಿ. ಗೃಹ ಸಚಿವರು ಮತ್ತು ನಗರ ಪೊಲೀಸ್ ಕಮಿಷನರ್ ಕಮಲ್ ಪಂತ್ ಸೇರಿದಂತೆ ಸಂಬಂಧಪಟ್ಟ ಎಲ್ಲರಿಗೂ ಈ ಬಗ್ಗೆ ಆಯೋಗದಿಂದ ಪತ್ರ ಬರೆಯಲಾಗುವುದು' ಎಂದು ಆಯೋಗದ ಅಧ್ಯಕ್ಷೆ ಪ್ರಮೀಳಾ ನಾಯ್ಡು ತಿಳಿಸಿದರು.

ಈ ಬೆಳವಣಿಗೆ ಮಧ್ಯೆಯೇ 34 ಸೆಕೆಂಡ್ ಅವಧಿಯ ವಿಡಿಯೊ ಬಿಡುಗಡೆ ಮಾಡಿರುವ ಸಂತ್ರಸ್ತೆ, ತನಗೆ ಹಾಗೂ ತನ್ನ ಕುಟುಂಬಕ್ಕೆ ರಕ್ಷಣೆ ನೀಡುವಂತೆ ಗೃಹ ಸಚಿವ ಬಸವರಾಜ ಬೊಮ್ಮಾಯಿ ಅವರನ್ನು ಕೋರಿದ್ದಾರೆ.

ಪ್ರಕರಣದ ವಿಚಾರಣೆಯನ್ನು ಎಸ್ಐಟಿಗೆ ವಹಿಸಿದ ಬಳಿಕ ನಾನು ಯಾವುದೇ ರೀತಿಯ ಹೇಳಿಕೆ ಕೊಡುವುದು ಸರಿಯಲ್ಲ. ವಿಚಾರಣೆ ಬಳಿಕ ಎಲ್ಲವೂ ಹೊರಗೆ ಬರುತ್ತದೆ

ಬಸವರಾಜ ಬೊಮ್ಮಾಯಿ
ಗೃಹ ಸಚಿವ

# ವಿಡಿಯೊ ಹರಿಬಿಟ್ಟ ಯುವತಿ

ಒಂದನೇ ಪುಟದಿಂದ

'ರಮೇಶ ಜಾರಕಿಹೊಳಿ ಅವರೇ ನನಗೆ ಕೆಲಸ ಕೊಡಿಸುತ್ತೇನೆ ಎಂದರು. ಅದೆಲ್ಲ ಮಾಡಿ ಈಗ ವಿಡಿಯೊವನ್ನು ಹೊರಗಡೆ ಬಿಡುತ್ತಿದ್ದಾರೆ. ನನಗೆ ಯಾವುದೇ ರಕ್ಷಣೆ ಇಲ್ಲ' ಎಂದೂ ಯುವತಿ ಹೇಳಿದ್ದಾರೆ.

'ಬೊಮ್ಮಾಯಿ ಅವರೇ ನನಗೆ ರಕ್ಷಣೆ ಕೊಡಿ. ಈ ವಿಡಿಯೊ ಹೇಗೆ ಮಾಡಿದರು ಎಂಬುದು ನನಗೆ ಗೊತ್ತಿಲ್ಲ. ಈಗಾಗಲೇ ನನ್ನ ಮಾನ, ಮರ್ಯಾದೆ ಹರಾಜು ಆಗಿಬಿಟ್ಟಿದೆ. ನನ್ನ ಮನೆ ಹತ್ತಿರ ಜನ ಬಂದು ಕೇಳಿಕೊಂಡು ಹೋಗುತ್ತಿದ್ದಾರೆ. ಅಪ್ಪ- ಅಮ್ಮ ಎರಡು ಬಾರಿ ಆತ್ಮಹತ್ಯೆಗೆ ಯತ್ನಿಸಿದ್ದಾರೆ. ನಾನು ಸಹ ಮೂರ್ನಾಲ್ಕು ಬಾರಿ ಆತ್ಮಹತ್ಯೆಗೆ ಯತ್ನಿಸಿದ್ದೇನೆ. ನಮಗೆ ರಾಜಕೀಯ ಬೆಂಬಲವೂ ಇಲ್ಲ' ಎಂದು ಯುವತಿ ವಿವರಿಸಿದ್ದಾರೆ.

## ಆಪ್ತನ ಮೂಲಕ ರಮೇಶ ಜಾರಕಿಹೊಳಿ ದೂರು

ರಮೇಶ ಜಾರಕಿಹೊಳಿ ತಮ್ಮ ಆಪ್ತರಾದ ಮಾಜಿ ಶಾಸಕ ಎಂ.ವಿ. ನಾಗರಾಜು ಮೂಲಕ ಸಲ್ಲಿಸಲಾಗಿರುವ ದೂರಿನ ಅನ್ವಯ ಅಪರಿಚಿತರ ವಿರುದ್ಧ ಎಫ್ಐಆರ್ ದಾಖಲಾಗಿದೆ.

ದೂರಿನ ಪರಿಶೀಲನೆ ನಡೆಸಿದ ಇನ್‌ಸ್ಪೆಕ್ಟರ್, ಅಪರಾಧ ಸಂಚು (ಐಪಿಸಿ 34), ಕ್ರಿಮಿನಲ್ ಪಿತೂರಿ (ಐಪಿಸಿ 120ಬಿ), ಬೆದರಿಸಿ ಸುಲಿಗೆಗೆ ಯತ್ನ (ಐಪಿಸಿ 385), ಸಹಿ ನಕಲು ಮಾಡಿದ (ಐಪಿಸಿ 465) ಹಾಗೂ ಗೌರವ ಹಾಳು ಮಾಡಲು ನಕಲು ಮಾಡಿದ (ಐಪಿಸಿ 469) ಆರೋಪದಡಿ ಎಫ್ಐಆರ್ ದಾಖಲಿಸಿಕೊಂಡಿದ್ದಾರೆ.

**ದೂರಿನ ವಿವರ:** 'ನನ್ನನ್ನು ರಾಜಕೀಯವಾಗಿ ತೇಜೋವಧೆ ಮಾಡಲು, ರಾಜಕೀಯವಾಗಿ ಮುಗಿಸಲು ಹಾಗೂ ಹಣ ವಸೂಲಿ ಮಾಡಲು ಷಡ್ಯಂತ್ರವನ್ನು ರೂಪಿಸುತ್ತಿದ್ದಾರೆ' ಎಂದು ರಮೇಶ ಜಾರಕಿಹೊಳಿ ದೂರಿನಲ್ಲಿ ತಿಳಿಸಿದ್ದಾರೆ.

'ಸುಮಾರು 3 ತಿಂಗಳಿನಿಂದ ಸದಾಶಿವನಗರದಲ್ಲಿ ನನ್ನ ವಿರುದ್ಧ ಮಸಲತ್ತು ಹಾಗೂ ಮೋಸ ಮಾಡಿ ಒಂದು ನಕಲಿ ಸಿ.ಡಿ.ಯನ್ನು ಸೃಷ್ಟಿಸಿ ಮಾನಸಿಕವಾಗಿ ಹಿಂಸಿಸಿ, ರಾಜಕೀಯವಾಗಿ ಮಾನಹಾನಿ ಮಾಡಿ ನನ್ನಿಂದ ಹಣ ಪಡೆಯಲು ಪ್ರಯತ್ನಿಸುತ್ತಿದ್ದಾರೆ. ಇದರ ಹಿಂದೆ ಹಲವಾರು ಜನರು ಇದ್ದು, ಕೆಲವರು ಷಡ್ಯಂತ್ರ ರಚಿಸಿ ಇನ್ನು ಕೆಲವರು ನಕಲಿ ಸಿ.ಡಿ ತಯಾರಿಸಲು ಭಾಗಿಯಾಗಿ ಹಾಗೂ ಇತರರನ್ನು ಬಳಸಿಕೊಂಡು ಅಂತರ್ಜಾಲದಲ್ಲಿ ಬಿಡುಗಡೆ ಮಾಡಿ ರಾಜಕೀಯ ಅಸ್ಥಿರತೆ ಉಂಟು ಮಾಡುತ್ತಿದ್ದಾರೆ. ಅವರನ್ನು ಪತ್ತೆ ಮಾಡಿ ಕಾನೂನು ಕ್ರಮ ಕೈಗೊಳ್ಳಿ' ಎಂದೂ ದೂರಿನಲ್ಲಿ ಉಲ್ಲೇಖಿಸಿದ್ದಾರೆ.